**Bangalore**
**Regional News**
**24.02.2025 / 1430 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ಮಹಾರಾಷ್ಟ್ರ-ಕರ್ನಾಟಕ ನಡುವೆ ಬಸ್ ಸಂಚಾರ ಸ್ಥಗಿತ; ಶೀಘ್ರವೇ ಸಮಸ್ಯೆ ಇತ್ಯರ್ಥಪಡಿಸಲು ಸಚಿವ ರಾಮಲಿಂಗಾರೆಡ್ಡಿ ಸೂಚನೆ**

**೨. ಮೈಸೂರು ಉದಯಗಿರಿ ಪ್ರಕರಣ; ಪೊಲೀಸರ ಕಾರ್ಯ ವೈಖರಿ ಬಗ್ಗೆ ಗೃಹ ಸಚಿವ ಪರಮೇಶ್ವರ್ ಸಮರ್ಥನೆ**

**೩. ಕೇಂದ್ರ ಬಜೆಟ್‌ನಲ್ಲಿ ರೈತರ ಕಲ್ಯಾಣಕ್ಕೆ ಆದ್ಯತೆ- ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ**

**೪. ಕೊಪ್ಪಳದಲ್ಲಿ ಉಕ್ಕು ಕಾರ್ಖಾನೆಗೆ ವಿರೋಧ; ಸ್ವಾಮೀಜಿ ಧರ್ಮ ಗುರುಗಳ ನೇತೃತ್ವದಲ್ಲಿ ಪ್ರತಿಭಟನೆ**

**<><*<><>*><>**

**ಬೆಳಗಾವಿಯಲ್ಲಿ ಮರಾಠಿ ಭಾಷಿಕ ಪ್ರಯಾಣಿಕರು ಬಾಳೆಕುಂದ್ರಿ ಗ್ರಾಮದಲ್ಲಿ ಉದ್ದೇಶಪೂರ್ವಕವಾಗಿ ಚಾಲಕನ ಮೇಲೆ ನಡೆಸಿದ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಐವರ ಮೇಲೆ ಪ್ರಕರಣ ದಾಖಲಿಸಿ ಕಾರಾಗೃಹದಲ್ಲಿಡಲಾಗಿದೆ ಎಂದು ರಾಜ್ಯ ಸಾರಿಗೆ ಸಚಿವ ರಾಮಲಿಂಗರೆಡ್ಡಿ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಪ್ರಕರಣದಲ್ಲಿ ೧೪ ಜನರು ಭಾಗಿಯಾಗಿದ್ದು, ಐವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳಲಾಗಿದೆ. ಉಭಯ ರಾಜ್ಯಗಳ ಸಾರಿಗೆ ಸಂಚಾರ ಸ್ಥಗಿತಗೊಂಡಿದೆ. ಈ ಬಗ್ಗೆ ಬೆಂಗಳೂರಿಗೆ ಆಗಮಿಸಿರುವ ಮಹಾರಾಷ್ಟದ ಸಚಿವರೊಂದಿಗೆ ಸಾರಿಗೆ ಇಲಾಖೆ ಕಾರ್ಯದರ್ಶಿಗೆ ಮಾತಾನಾಡಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ. ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ತೆಗೆದುಕೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.**

**<><*<><>*><>**

ಮೈಸೂರಿನ ಉದಯಗಿರಿ ಪೊಲೀಸ್ ಠಾಣೆಯಲ್ಲಿ ನಡೆದ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಅಗತ್ಯ ಕ್ರಮ ಕೈಗೊಂಡಿದ್ದಾರೆ ಎಂದು ಗೃಹ ಸಚಿವ ಡಾ. ಜಿ.ಪರಮೇಶ್ವರ್ ಸಮರ್ಥಿಸಿಕೊಂಡಿದ್ದಾರೆ. ತುಮಕೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಜೆಪಿ ನಾಯಕರು ಘಟನೆಯನ್ನು ರಾಜಕೀಯವಾಗಿ ಬಳಿಸಿಕೊಂಡು ಇಲ್ಲಸಲ್ಲದ ಹೇಳಿಕೆಗಳನ್ನು ನೀಡುತ್ತಿದ್ದಾರೆ ಎಂದು ತಿಳಿಸಿದ್ದಾರೆ. ಇದೇ ವೇಳೆ ಮಂಗಳೂರು ಜೈಲಿನಲ್ಲಿ ಮಾದಕ ವಸ್ತು ಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಪರಿಶೀಲನೆ ನಡೆಸುವಂತೆ ಸೂಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ, ಕಳೆದ ಬಾರಿಯಂತೆ ಈ ಬಾರಿಯೂ ಬಜೆಟ್ ನಲ್ಲಿ ರೈತರ ಕಲ್ಯಾಣಕ್ಕೆ ಹಲವು ಯೋಜನೆಗಳನ್ನು ಪ್ರಕಟಿಸಿದೆ ಎಂದು ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮೈಸೂರಿನಲ್ಲಿಂದು ತಿಳಿಸಿದ್ದಾರೆ. ಕೃಷಿ ವಲಯದ ಉನ್ನತಿಗಾಗಿ ೧.೭೨ ಲಕ್ಷ ಕೋಟಿ ಅನುದಾನವನ್ನು ಪ್ರಕಟಿಸಲಾಗಿದ್ದು, ಈ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸುವ ನವೋದ್ಯಮಗಳ ಪ್ರೋತ್ಸಾಹಕ್ಕೆ ೧೦ ಸಾವಿರ ಕೋಟಿ ರೂಪಾಯಿಗಳ ನೆರವನ್ನು ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ವಿಶೇಷವಾಗಿ ಮೀನುಗಾರಿಕೆ, ಹೈನೋದ್ಯಮ, ಚರ್ಮೋದ್ಯಮ ಕ್ಷೇತ್ರಗಳ , ಬೆಳವಣಿಗೆಗೆ ಕೇಂದ್ರ ಸರ್ಕಾರ ಒತ್ತು ನೀಡಿದೆ. ಚರ್ಮೋದ್ಯಮ ಕ್ಷೇತ್ರದಲ್ಲಿ ೪ ಲಕ್ಷ ಕೋಟಿ ರೂಪಾಯಿಗಳ ವಹಿವಾಟು ನಿರೀಕ್ಷಿಸಲಾಗಿದೆ. ಅದೇ ರೀತಿ ೨೦ ಲಕ್ಷ ಉದ್ಯೋಗ ಅವಕಾಶ ಹಾಗೂ ಒಂದು ಲಕ್ಷ ಕೋಟಿ ರೂಪಾಯಿಗಳ ವಿದೇಶಿ ವಿನಿಮಯ ಮಾಡುವ ಗುರಿಯನ್ನು ಹೊಂದಲಾಗಿದೆ ಎಂದು ಹೇಳಿದ್ದಾರೆ.

<><*<><>*><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೧೯ನೇ ಕಂತಿನ ಹಣವನ್ನು ಬಿಹಾರದ ಬಘಲ್‌ಪುರದಲ್ಲಿ ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಬಿಹಾರ್ ಮುಖ್ಯಮಂತ್ರಿ ನಿತೀಶ್ ಕುಮಾರ್ ಸೇರಿದಂತೆ ರಾಜಕೀಯ ನಾಯಕರು ಉಪಸ್ಥಿತರಿದ್ದರು. ಈ ಯೋಜನೆಯಡಿ ಜಮೀನು ಹೊಂದಿರುವ ರೈತರಿಗೆ ವಾರ್ಷಿಕವಾಗಿ ಆರು ಸಾವಿರ ರೂಪಾಯಿ ನೀಡಲಾಗುತ್ತದೆ. ದೇಶಾದ್ಯಂತ ೭೩೧ ಕೃಷಿ ವಿಜ್ಞಾನ ಕೇಂದ್ರಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು. ನೇರ ನಗದು ವರ್ಗಾವಣೆ ಮೂಲಕ ೨೨ ಸಾವಿರ ಕೋಟಿ ರೂಪಾಯಿಗೂ ಹೆಚ್ಚು ಮೊತ್ತದ ನೆರವು ದೇಶಾದ್ಯಂತದ ೯.೮ ಕೋಟಿಗೂ ಅಧಿಕ ರೈತರಿಗೆ ಸಿಗಲಿದೆ. ಈವರೆಗೆ ೧೧ ಕೋಟಿಗೂ ಅಧಿಕ ರೈತ ಕುಟುಂಬಗಳಿಗೆ ೩.೪೬ ಲಕ್ಷ ಕೋಟಿ

ರೂಪಾಯಿಗಳನ್ನು ನೀಡಲಾಗಿದೆ. ಇದೇ ವೇಳೆ ಮಾತನಾಡಿದ ಪ್ರಧಾನಿ ನರೇಂದ್ರ ಮೋದಿ, ರೈತರ ಶ್ರೇಯೋಭಿವೃದ್ಧಿಗೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ತಿಳಿಸಿದರು. ಕೊರೋನಾ ಸಂಕಷ್ಟ ಕಾಲದಲ್ಲೂ ರೈತರನ್ನು ಕೈ ಬಿಟ್ಟಿಲ್ಲ. ಯೂರಿಯಾ ಸೇರಿದಂತೆ ರಸಗೊಬ್ಬರ ಎನ್‌ಡಿಎ ಆಡಳಿತದಲ್ಲಿ ರೈತರಿಗೆ ಸುಲಭವಾಗಿ ಕೈಗೆಟಕುವ ದರದಲ್ಲಿ ಲಭ್ಯವಾಗುತ್ತಿದೆ ಎಂದು ತಿಳಿಸಿದರು. ಹಾಲು ಉತ್ಪಾದನೆಯಲ್ಲಿ ಭಾರತ ಪ್ರಗತಿ ಸಾಧಿಸಿದೆ ಎಂದು ಪ್ರಧಾನಿ ಇದೇ ಸಂದರ್ಭದಲ್ಲಿ ರೈತರನ್ನು ಅಭಿನಂದಿಸಿದರು. ಬಿಹಾರದಲ್ಲಿ ರಾಷ್ಟ್ರೀಯ ಆಹಾರ ತಂತ್ರಜ್ಞಾನ ಸಂಸ್ಥೆ ಸ್ಥಾಪಿಸುವುದಾಗಿ ಪ್ರಧಾನಿ ಘೋಷಿಸಿದರು.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬಹಿರಂಗ ಪತ್ರ ಬರೆದಿದ್ದಾರೆ. ಕರ್ನಾಟಕವು ಸಂಪೂರ್ಣ ದಿವಾಳಿಯಗುವತ್ತ ಮುನ್ನೆಡಿದಿದೆ ಎಂದು ಪ್ರಸ್ತಾಪಿಸಿರುವ ಅವರು, ರಾಜ್ಯ ಆರ್ಥಿಕ ಪರಿಸ್ಥಿತಿಯ ಬಗ್ಗೆ ಶ್ವೇತಪತ್ರ ಹೊರಡಿಸುವಂತೆ ಆಗ್ರಹಿಸಿದ್ದಾರೆ. ರಾಜ್ಯದಲ್ಲಿ ಅತ್ಯಂತ ನಿರ್ಲಕ್ಷ್ಯಕ್ಕೆ ತುತ್ತಾಗಿರುವ ಕ್ಷೇತ್ರವೆಂದರೆ ಅದು ಶಿಕ್ಷಣ ಇಲಾಖೆ. ಈ ಬಾರಿಯ ಬಜೆಟ್‌ನಲ್ಲಿ ಶಿಕ್ಷಣಕ್ಕೆ ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದ್ದಾರೆ. ಇದೇ ವೇಳೆ ಮೆಟ್ರೋ ಪ್ರಯಾಣ ದರ ಇಳಿಸುವಂತೆ ದರ ನಿಗದಿ ಆಯೋಗಕ್ಕೆ ಪತ್ರ ಬರೆಯಲು ಒತ್ತಾಯಿಸಿದ್ದಾರೆ.

<><*<><>*><>

ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ನಾಳೆ ದೆಹಲಿ ಪ್ರವಾಸ ಕೈಗೊಳ್ಳಲಿದ್ದಾರೆ. ಈ ವೇಳೆ ಕೇಂದ್ರ ಜಲಶಕ್ತಿ ಸಚಿವ ಗಜೇಂದ್ರ ಸಿಂಗ್ ಶೇಖಾವತ್ ಅವರನ್ನು ಭೇಟಿ ಮಾಡಲಿದ್ದಾರೆ. ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರದಿಂದ ನೆರವು, ಮೇಕೆದಾಟು, ಮಹಾದಾಯಿ, ಕೃಷ್ಣ ಮೇಲ್ದಂಡೆ ಯೋಜನೆಗಳ ಕುರಿತು ಕೇಂದ್ರ ಸಚಿವರೊಂದಿಗೆ ಚರ್ಚಿಸಲಿದ್ದಾರೆ. ಬಳಿಕ ಅವರು, ಕಾಂಗ್ರೆಸ್ ಹಿರಿಯ ನಾಯಕರಾದ ಮಲ್ಲಿಕಾರ್ಜುನ್ ಖರ್ಗೆ, ರಾಹುಲ್ ಗಾಂಧಿಯವರನ್ನು ಭೇಟಿ ಮಾಡಲಿದ್ದಾರೆ.

<><*<><>*><>

ಕಂದಾಯ ಇಲಾಖೆ ನ್ಯಾಯಾಲಯಗಳಲ್ಲಿನ ಪ್ರಕರಣಗಳ ವಿಲೇವಾರಿಯಲ್ಲಿ ಮಂಡ್ಯ ಜಿಲ್ಲೆ ರಾಜ್ಯದಲ್ಲೇ ಪ್ರಥಮ ಸ್ಥಾನ ಗಳಿಸಿದೆ. ಕೇವಲ ಒಂದೂವರೆ ವರ್ಷದ ಅವಧಿಯಲ್ಲಿ ಬರೋಬ್ಬರಿ ೧೬ ಸಾವಿರದ ೬೭೮ ಪ್ರಕರಣಗಳನ್ನು ವಿಲೇವಾರಿ ಇತ್ಯರ್ಥ ಶೇಕಡ ೯೦.೬೦ರಷ್ಟು ಪ್ರಗತಿ ಸಾಧಿಸಲಾಗಿದೆ. ಜಿಲ್ಲಾಧಿಕಾರಿ ಡಾ.ಕುಮಾರ ಅವರ ಪ್ರಯತ್ನದ ಫಲವಾಗಿ ಕಡಿಮೆ ಅವಧಿಯಲ್ಲಿ ಕಂದಾಯ ಪ್ರಕರಣಗಳು ಗರಿಷ್ಠ ಪ್ರಮಾಣದಲ್ಲಿ ಇತ್ಯರ್ಥಗೊಂಡಿವೆ. ಪ್ರಕರಣಗಳ ವಿಲೇವಾರಿಯಲ್ಲಿ

ಸಾಕಷ್ಟು ವಿಳಂಬವಾಗುತ್ತಿದ್ದ ಹಿನ್ನಲೆಯಲ್ಲಿ ಜಿಲ್ಲಾಧಿಕಾರಿ ಇದನ್ನು ಗಂಭೀರವಾಗಿ ಪರಿಗಣಿಸಿದ್ದರು. ಈ ಸಂಬಂಧ ಕಳೆದ ಒಂದೂವರೆ ವರ್ಷದ ಅವಧಿಯಲ್ಲಿ ಹಲವು ಬಾರಿ ಉಪ ವಿಭಾಗಾಧಿಕಾರಿಗಳು ಮತ್ತು ತಹಸೀಲ್ದಾರರ ಜೊತೆ ಸಭೆ ನಡೆಸಿದ್ದರು. ಇದರ ಫಲವಾಗಿ ಗರಿಷ್ಠ ಪ್ರಕರಣಗಳು ವಿಲೇವಾರಿಗೊಂಡಿವೆ.

<><*<><>*><>

ಕೊಪ್ಪಳದಲ್ಲಿಂದು ಬಲ್ಡೋಟಾ ಕಂಪನಿಯ ಉಕ್ಕು ಘಟಕ ಸ್ಥಾಪನೆ ವಿರೋಧಿಸಿ ಬೃಹತ್ ಪ್ರತಿಭಟನೆ ನಡೆಯಿತು. ಪ್ರತಿಭಟನೆಯಲ್ಲಿ ಕೊಪ್ಪಳ ನಗರದ ಗವಿಸಿದ್ದೇಶ್ವರ ಸ್ವಾಮಿಜಿ ಹಾಗೂ ಯೂಸೂಫಿಯಾ ಮಸೀದಿಯ ಧರ್ಮಗುರು ಮುಫ್ತಿ ನಜೀರ್ ಅಹಮದ್ ತಸ್ಕೀನ್, ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ್ ಮತ್ತು ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ. ಕೊಪ್ಪಳ ಸಂಸದ ರಾಜಶೇಖರ ಹಿಟ್ನಾಳ ಸೇರಿದಂತೆ ಹಲವು ಹೋರಾಟಗಾರರು ಮಠಾಧೀಶರು ಉಪಸ್ಥಿತರಿದ್ದರು.

<><*<><>*><>

ದೇಶಾದ್ಯಂತ ಸ್ಥೂಲಕಾಯದ ವಿರುದ್ಧ ಹೋರಾಡಲು ಪ್ರಧಾನಿ ನರೇಂದ್ರ ಮೋದಿ, ಹತ್ತು ಮಂದಿಯನ್ನು ನಾಮ ನಿರ್ದೇಶನ ಮಾಡಿದ್ದಾರೆ. ರಾಜ್ಯಸಭಾ ಸಂಸದೆ, ಕನ್ನಡತಿ ಸುಧಾಮೂರ್ತಿ ಈ ಅಭಿಯಾನವನ್ನು ಮುನ್ನೆಡಸಲಿದ್ದಾರೆ. ಇದೀಗ ಸುಧಾಮೂರ್ತಿ, ಬಯೋಕಾನ್ ಮುಖ್ಯಸ್ಥೆ ಕಿರಣ್ ಮಜುಂದಾರ್, ಪಿ.ಟಿ.ಉಷಾ, ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ, ಇನ್ಫೋಸಿಸ್ ಸಂಸ್ಥೆಯ ಸಹ ಸಂಸ್ಥಾಪಕ ನಂದನ್ ನೀಲೆಕಣಿ ನಿವೃತ್ತ ಐಪಿಎಸ್ ಅಧಿಕಾರಿ ಕಿರಣ್‌ಬೇಡಿ ಸೇರಿದಂತೆ ಹಲವರನ್ನು ನಾಮ ನಿರ್ದೇಶನ ಮಾಡಿದ್ದಾರೆ. ಈ ರಾಷ್ಟ್ರೀಯ ಆಂದೋಲನವು, ಆರೋಗ್ಯಕರ ಆಹಾರ ಸೇವನೆಯ ಬಗ್ಗೆ ಜಾಗೃತಿ ಮೂಡಿಸುವ ಗುರಿ ಹೊಂದಿದೆ.

<><*<><>*><>

ದೇಶದ ಪ್ರತಿಷ್ಠಿತ ಭಾರತೀಯ ವಿಜ್ಞಾನ ಸಂಸ್ಥೆಯಲ್ಲಿ ಮಾರ್ಚ್ ೧ ರಂದು ಬೆಳಗ್ಗೆ ೯ ರಿಂದ ಸಂಜೆ ೫ ರವರೆಗೆ 'ಓಪನ್ ಡೇ' ಆಚರಿಸಲಾಗುತ್ತಿದೆ. ಅಂದು ಯಾರು ಬೇಕಾದರೂ ಮಲ್ಲೇಶ್ವರಂನ ಐಐಎಸ್‌ಸಿ ಕ್ಯಾಂಪಸ್ ಗೆ ಭೇಟಿ ನೀಡಿ, ವಿಜ್ಞಾನ ಪ್ರದರ್ಶನಗಳನ್ನು ವೀಕ್ಷಿಸಬಹುದು. ಸ್ವತಃ ಪ್ರಯೋಗಗಳನ್ನು ಮಾಡಬಹುದು. ಸಾರ್ವಜನಿಕರು ವಿಜ್ಞಾನಿಗಳ ಜೊತೆ ಸಂವಾದದಲ್ಲೂ ಪಾಲ್ಗೊಳ್ಳಬಹುದು. ಐಐಎಸ್‌ಸಿ ಯ ರಸಾಯನ ಶಾಸ್ತ್ರ, ಕಂಪ್ಯೂಟರ್ ಸೈನ್ಸ್ ಬಯೋ ಕೆಮಿಸ್ಟ್ರಿ ಸೇರಿದಂತೆ ४೨ ವಿಭಾಗಗಳಿಗೆ ಭೇಟಿ ನೀಡಿ ಅಲ್ಲಿನ ಪ್ರಯೋಗಗಳನ್ನು ತಿಳಿಯಬಹುದು. ಐಐಎಸ್‌ಸಿ

ಸಂಸ್ಥಾಪಕ ಜೆಮ್‌ಶೆಡ್ ಜಿ ಟಾಟಾ ಅವರ ಹುಟ್ಟು ಹಬ್ಬದ ಹಿನ್ನೆಲೆಯಲ್ಲಿ ಮಾರ್ಚ್ ಮೊದಲ ವಾರದ ಶನಿವಾರ ಓಪನ್ ಡೇ ಆಚರಿಸಲಾಗುತ್ತಿದೆ.

<><*<><>*><>

ಹಾಸನ ಜಿಲ್ಲೆ ವಿಚಾರವಾಗಿ ಕಾಂಗ್ರೆಸ್ ಸರ್ಕಾರ ದ್ವೇಷದ ರಾಜಕಾರಣ ಮಾಡುತ್ತಿದೆ ಎಂದು ಮಾಜಿ ಸಚಿವ, ಹಾಲಿ ಶಾಸಕ ಎಚ್ಡಿ ರೇವಣ್ಣ ಆರೋಪಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಲ್ಲೆಯಲ್ಲಿ ಹಲವು ಇಲಾಖೆಗಳಿಗೆ ಅನುದಾನ ನೀಡದೆ ವಿಳಂಬ ಮಾಡಲಾಗುತ್ತಿದೆ ಎಂದು ದೂರಿದ್ದಾರೆ. ಹಾಸನ ವಿಶ್ವ ವಿದ್ಯಾನಿಲಯಕ್ಕೆ ಹೆಚ್ಚಿನ ಅನುದಾನ ನೀಡಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬದಲಾಗಿ ಇರುವ ವಿಶ್ವ ವಿದ್ಯಾನಿಲಯವನ್ನು ರದ್ದು ಮಾಡಲು ಮುಂದಾಗಿದೆ ಎಂದು ಹೇಳಿದ್ದಾರೆ. ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಹಾಸನ ಜಿಲ್ಲೆಗೆ ಯಾವುದೇ ಹೊಸ ಯೋಜನೆ ಜಾರಿಗೆ ತಂದಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

<><*<><>*><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ವತಿಯಿಂದ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥಾಪನಾ ದಿನಾಚರಣೆ ಆಚರಿಸಲಾಯಿತು. ಬೆಂಗಳೂರು ಗ್ರಾಮಾಂತರ ಜಿಲ್ಲಾ ಆಯುಕ್ತ ನಾಗರಾಜ್ ಮಾತನಾಡಿ, ಜೀವನದಲ್ಲಿ ಶಿಸ್ತು ದೇಶ ಭಕ್ತಿ ಮೂಡಿಸುವಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್ ಪಾತ್ರ ಮಹತ್ವದ್ದಾಗಿದೆ ಎಂದು ತಿಳಿಸಿದರು.

<><*<><>*><>

ಕಾರ್ಮಿಕರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಸಿಐಟಿಯು ನೇತೃತ್ವದಲ್ಲಿ ಮಾರ್ಚ್ ೩ರಿಂದ ೭ರವರೆಗೆ ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನವನದಲ್ಲಿ ನಡೆಯಲಿರುವ ಅಹೋರಾತ್ರಿ ಧರಣಿ ಹಿನ್ನಲೆಯಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ಸಿಐಟಿಯು ಪ್ರಚಾರೋಂದಲನ ನಡೆಯಿತು. ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಬೇಕು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ನಿರ್ಮಾಣಗೊಂಡಿರುವ ಇಎಸ್ಐ ಆಸ್ಪತ್ರೆ ಪೂರ್ಣಗೊಳಿಸಬೇಕು ಸೇರಿದಂತೆ ವಿವಿಧ ಬೇಡಿಕಗಳನ್ನು ಈಡೇರಿಸುವಂತೆ ಒತ್ತಾಯಿಸಿ ಧರಣಿ ನಡೆಸಲಾಗುವುದು ಎಂದು ಸಿಐಟಿಯು ಜಿಲ್ಲಾ ಉಪಾಧ್ಯಕ್ಷ ಪಿ.ಎ.ವೆಂಕಟೇಶ್ ತಿಳಿಸಿದ್ದಾರೆ.

<><*<><>*><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ಕ್ಕೆ ಆರಂಭವಾಗಲಿದೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>